# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 103 |
| ಸದಸ್ಯರ ಹೆಸರು | : | ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 09–07–2018 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು. |

| ಕ್ರ.ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ಗ್ರಾಮ ಪಂಚಾಯತ್‌ಗಳಿಂದ ಅನುಷ್ಠಾನಗೊಳ್ಳುತ್ತಿರುವ ಉಸ್ತುವಾರಿ ಮಾಡುತ್ತಿರುವ ಕಾರ್ಯಕ್ರಮ, ಯೋಜನೆಗಳಾವುವು; ಇತರ ಪ್ರಕಾರ್ಯಗಳಾವುವು; (ಸಂಪೂರ್ಣ ವಿವರ ನೀಡುವುದು) ಅವುಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯಕ್ರಮಗಳು ಮತ್ತು ಅನ್ಯ ಇಲಾಖೆಯ ಕಾರ್ಯಕ್ರಮಗಳಾವುವು; | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 58 ರಿಂದ 58 (ಎಫ್) ವರೆಗೆ ನಿಗಧಿಪಡಿಸಿದ ಪ್ರಕಾರ್ಯಗಳನ್ನು ಗ್ರಾಮ ಪಂಚಾಯತ್‌ಗಳು ಅನುಷ್ಠಾನಗೊಳಿಸುತ್ತಿವೆ.<br><br>ಗ್ರಾಮ ಪಂಚಾಯತಿಗಳಲ್ಲಿ 14ನೇ ಹಣಕಾಸು ಯೋಜನೆ, ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ, ಗ್ರಾಮ ವಿಕಾಸ ಯೋಜನೆ, ವಿವಿಧ ವಸತಿ ಯೋಜನೆಗಳು, ಸ್ವಚ್ಛ ಭಾರತ್ ಮಿಷನ್, ಗ್ರಾಮೀಣ ಕುಡಿಯುವ ನೀರಿನ ಯೋಜನೆಗಳ ನಿರ್ವಹಣೆ, ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳು, ಇತರೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಕಾರ್ಯಕ್ರಮ/ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br><br>ಕರ್ನಾಟಕ ಗ್ರಾಮ ಸ್ವರಾಜ್ ರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಅನುಸೂಚಿ–1 ರಲ್ಲಿ ಗ್ರಾಮ ಪಂಚಾಯತಿಗಳಿಗೆ ನಿಗಧಿಪಡಿಸಿರುವ ಇತರೆ 31 ಇಲಾಖಾ ಕಾರ್ಯಕ್ರಮಗಳಲ್ಲಿ ಕೆಲವು ಕಾರ್ಯಕ್ರಮಗಳ ಮೇಲುಸ್ತುವಾರಿ ಜವಾಬ್ದಾರಿಗಳನ್ನು ವಹಿಸಲಾಗಿದೆ.<br><br>ಇದಲ್ಲದೆ, ಅನ್ಯ ಇಲಾಖೆಯ ಕಾರ್ಯಕ್ರಮಗಳಾದ ಪಡಿತರ ಚೀಟಿ ವಿತರಣೆ, ಬೆಳೆ ಕಟಾವು ವರದಿ, ಬಾಪೂಜಿ ಸೇವಾ ಕೇಂದ್ರದಡಿ ಕೆಲವು ಅನ್ಯ ಇಲಾಖೆಯ ಸೇವೆಗಳನ್ನು ಒದಗಿಸುವುದು, ಇತ್ಯಾದಿ ಕೆಲಸಗಳನ್ನು ವಹಿಸಲಾಗಿದೆ. |
| ಆ | ಗ್ರಾಮ ಪಂಚಾಯತ್‌ಗಳಿಗೆ ಮಂಜೂರಾದ ಖಾಯಂ ಹುದ್ದೆಗಳಾವುವು; ಸದರಿ ಹುದ್ದೆಗಳಿಗೆ ನೀಡುತ್ತಿರುವ ವೇತನ ಮತ್ತು ಇತರೆ ಸೌಲಭ್ಯಗಳೇನು; | ಗ್ರಾಮ ಪಂಚಾಯತ್‌ಗಳಿಗೆ ಮಂಜೂರಾದ ಖಾಯಂ ಹುದ್ದೆಗಳು ಹಾಗೂ ಪಾವತಿಸಿರುತ್ತಿರುವ ವೇತನದ ವಿವರ ಕೆಳಗಿನಂತಿರುತ್ತದೆ.<br><br>ಕ್ರ.ಸಂ. / ವೃಂದ / ಮಾಸಿಕ ವೇತನ (ರೂ.ಗಳಲ್ಲಿ)<br>1 / ಪಂಚಾಯಿತಿ ಅಭಿವೃದ್ಧಿ ಅಧಿಕಾರಿ / 37,900–70,850<br>2 / ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್–1 / 27,650–52,650<br>3 / ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್–2 / 21,400–42,000<br>4 / ದ್ವಿತೀಯ ದರ್ಜೆ ಲೆಕ್ಕ ಸಹಾಯಕರು / 21,400–42,000<br><br>ಕರ್ನಾಟಕ ರಾಜ್ಯ ಸರ್ಕಾರಿ ನೌಕರಿಗೆ ಅನ್ವಯವಾಗುವ ಎಲ್ಲಾ ಸೌಲಭ್ಯಗಳನ್ನು ನೀಡಲಾಗುತ್ತಿದೆ. |

| ಕ್ರ.ಸಂ. | ವೃಂದ | ಮಾಸಿಕ ವೇತನ (ರೂ.ಗಳಲ್ಲಿ) |
|---|---|---|
| 1 | ಪಂಚಾಯಿತಿ ಅಭಿವೃದ್ಧಿ ಅಧಿಕಾರಿ | 37,900–70,850 |
| 2 | ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್–1 | 27,650–52,650 |
| 3 | ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್–2 | 21,400–42,000 |
| 4 | ದ್ವಿತೀಯ ದರ್ಜೆ ಲೆಕ್ಕ ಸಹಾಯಕರು | 21,400–42,000 |

| | | |
|---|---|---|
| ಇ | ಗ್ರಾಮ ಪಂಚಾಯತ್‌ನ ಕಡಿಮೆ ಸಿಬ್ಬಂದಿಯಿಂದ ಇಷ್ಟೊಂದು ಯೋಜನೆ, ಕಾರ್ಯಕ್ರಮಗಳ ಸಮರ್ಪಕ ಅನುಷ್ಠಾನ ಮಾಡಲು ಸಾಧ್ಯವೇ; ಇಷ್ಟೊಂದು ಕಡಿಮೆ ಸಿಬ್ಬಂದಿಗೆ ಕರ್ತವ್ಯ ನಿರ್ವಹಿಸಲಾಗದಿರುವಷ್ಟು ಒತ್ತಡ ಸೃಷ್ಠಿಯಾಗಿರುವುದು ನಿಜವೇ; | ಕಷ್ಟ ಸಾಧ್ಯವಾಗಿದೆ.<br><br>ಗ್ರಾಮ ಪಂಚಾಯತಿಗಳಿಂದ ಅನುಷ್ಠಾನವಾಗುತ್ತಿರುವ ಯೋಜನೆ/ಕಾರ್ಯಕ್ರಮಗಳ ಅನುಷ್ಠಾನವನ್ನು ಗ್ರಾಮ ಪಂಚಾಯತಿಗಳಲ್ಲಿ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಂದಲೇ ನಿರ್ವಹಿಸಲಾಗುತ್ತಿದ್ದು, ಒತ್ತಡ ಸೃಷ್ಟಿಯಾಗಿರುವುದನ್ನು ಸರ್ಕಾರವು ಗಮನಿಸಿದೆ. |
| ಈ | ಇಲಾಖೆಯ ಕಾರ್ಯಕ್ರಮ ಸಮರ್ಪಕವಾಗಿ ಅನುಷ್ಠಾನಗೊಳಿಸಲು, ಗ್ರಾಮ ಪಂಚಾಯತ್‌ಗಳ ಸಿಬ್ಬಂದಿ ಸಂಖ್ಯೆಗಳನ್ನು ಹೆಚ್ಚು ಮಾಡಲು ಪ್ರತಿ ಗ್ರಾಮ ಪಂಚಾಯತ್‌ಗಳಿಗೆ ಲೆಕ್ಕಸಹಾಯಕರು ನೀಡಲು ಆರ್ಥಿಕ ಇಲಾಖೆಯಲ್ಲಿ ಬಾಕಿ ಇರುವ ಪ್ರಸ್ತಾವನೆಗಳಾದ ತಾಲ್ಲೂಕು ಮಟ್ಟದಲ್ಲಿ ವಿವಿಧ ಯೋಜನೆಗಳಿಗೆ ಹೆಚ್ಚುವರಿ ಸಹಾಯಕ ನಿರ್ದೇಶಕ ಮತ್ತು ಗ್ರಾಮೀಣಾಭಿವೃದ್ಧಿ ಅಧಿಕಾರಿ (ಆರ್.ಡಿ.ಓ.) ಹುದ್ದೆ ಸೃಜನೆಯ ಅವಶ್ಯಕತೆಯನ್ನು ಸರ್ಕಾರ ಗಮನಿಸಿದೆಯೇ; ಈ ಬಗ್ಗೆ ಸರ್ಕಾರದ ನಿಲುವೇನು; | ಸರ್ಕಾರ ಗಮನಿಸಿದೆ.<br><br>ರಾಜ್ಯದ 6022 ಗ್ರಾಮ ಪಂಚಾಯಿತಿಗಳ ಪೈಕಿ ಹೆಚ್ಚಿನ ಆರ್ಥಿಕ ಮತ್ತು ಆಡಳಿತಾತ್ಮಕ ಜವಾಬ್ದಾರಿಯುಳ್ಳ ಪ್ರತಿ ಗ್ರಾಮ ಪಂಚಾಯಿತಿಗೆ ಒಂದರಂತೆ ಒಟ್ಟು 2579 ಗ್ರಾಮ ಪಂಚಾಯಿತಿಗಳಲ್ಲಿ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳನ್ನು ಸೃಜಿಸಲಾಗಿದೆ. ಇನ್ನುಳಿದ 3443 ಗ್ರಾಮ ಪಂಚಾಯಿತಿಗಳಿಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳನ್ನು ಸೃಜಿಸಲು ಉದ್ದೇಶಿಸಿದೆ. ಈ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಅನುಮೋದನೆ ಕೋರಲಾಗಿದೆ.<br><br>ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ 3 ಹಂತದ ಪಂಚಾಯತ್ ರಾಜ್ ವ್ಯವಸ್ಥೆಯನ್ನು ಸದೃಢಗೊಳಿಸಲು ಹಲವಾರು ಆಡಳಿತಾತ್ಮಕ ಸುಧಾರಣೆಗಳನ್ನು ತರಲು ಉದ್ದೇಶಿಸಲಾಗಿದೆ. ತಾಲ್ಲೂಕು ಪಂಚಾಯಿತಿಗಳಲ್ಲಿ ಹಾಲಿ ಇರುವ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ವೃಂದದ ಜೊತೆಗೆ ಹೆಚ್ಚುವರಿಯಾಗಿ 2 ಸಹಾಯಕ ನಿರ್ದೇಶಕರುಗಳ ಹುದ್ದೆಗಳನ್ನು ಸೃಜಿಸಲು ಪ್ರಸ್ತಾಪಿಸಲಾಗಿದೆ. ಈ ಹುದ್ದೆಗಳ ಸೃಜನೆಗೆ ಆರ್ಥಿಕ ಇಲಾಖೆಯ ಅನುಮತಿ ಕೋರಲಾಗಿ ಪ್ರಸ್ತುತ 6ನೇ ವೇತನ ಆಯೋಗದ ಶಿಫಾರಸ್ಸುಗಳ ಅನುಷ್ಠಾನದಿಂದ ವೇತನ ಹೆಚ್ಚಳದ ಹೊರೆಯನ್ನು ಭರಿಸಬೇಕಾಗಿರುವುದರಿಂದ ಪ್ರಸ್ತಾವನೆಯನ್ನು ಮುಂದೂಡುವಂತೆ ಹಾಗೂ ವೇತನ ವೆಚ್ಚವು ಸುಧಾರಿಸಿದ ನಂತರ ಮರುಮಂಡಿಸುವಂತೆ ತಿಳಿಸಿದೆ.<br><br>ಈ ಎರಡೂ ಪ್ರಸ್ತಾವನೆಗಳಿಗೆ ಅರ್ಥಿಕ ಇಲಾಖೆಯ ಅನುಮೋದನೆ ಪಡೆದು ಹೆಚ್ಚುವರಿ ಸಹಾಯಕ ನಿರ್ದೇಶಕರು ಹುದ್ದೆಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳನ್ನು ಸೃಜಿಸಲು ಕ್ರಮವಹಿಸಲಾಗುವುದು.<br><br>ಗ್ರಾಮ ಪಂಚಾಯಿತಿಗಳು ನಿರ್ವಹಿಸುತ್ತಿರುವ ಹಲವಾರು ಪ್ರಮುಖ ಯೋಜನೆಗಳ ಮೇಲ್ವಿಚಾರಣೆ ಮಾಡುವ ಉದ್ದೇಶದಿಂದ ಹೋಬಳಿಗೆ ಒಂದರಂತೆ ಗ್ರಾಮೀಣ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಸೃಜಿಸಲು ಗ್ರಾಮ ಸ್ವರಾಜ್ ಯೋಜನೆ-2ನೇ ಹಂತದ ಪ್ರಸ್ತಾವನೆಯಲ್ಲಿ ಅಳವಡಿಸಲಾಗಿದೆ. ಈ ಯೋಜನೆಗೆ ವಿಶ್ವಬ್ಯಾಂಕ್ ನೆರವನ್ನು ಕೋರಲಾಗಿದ್ದು ವಿಶ್ವಬ್ಯಾಂಕ್ ನೆರವು ದೊರೆತು ಯೋಜನೆ ಕೈಗೊಂಡಲ್ಲಿ ಈ ಹುದ್ದೆಗಳನ್ನು ಸೃಜಿಸಲಾಗುವುದು.<br><br>ಪ್ರಸ್ತುತ ಗ್ರಾಮ ಪಂಚಾಯಿತಿಗಳ ಸಿಬ್ಬಂದಿ ವರ್ಗದ ಮಾದರಿಯಲ್ಲಿರುವ ಹುದ್ದೆಗಳ ಜೊತೆಗೆ ಪ್ರತಿ ಗ್ರಾಮ ಪಂಚಾಯಿತಿಗೆ ಒಂದು ಡಾಟಾ ಎಂಟ್ರಿ ಆಪರೇಟರ್ ಹುದ್ದೆ ಸೃಜಿಸಲಾಗಿದೆ. |
| ಉ | ಅನೇಕ ಆರ್ಥಿಕ ಮತ್ತು ಆಡಳಿತಾತ್ಮಕ ಜವಾಬ್ದಾರಿಯನ್ನು ನಿರ್ವಹಿಸುವ ಗ್ರಾಮ ಪಂಚಾಯತ್‌ಗಳಲ್ಲಿನ ಪಿ.ಡಿ.ಓ. ಹುದ್ದೆಗಳನ್ನು ಗ್ರೂಪ್ ಬಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಕಳೆದ ಎರಡು ವರ್ಷದಿಂದ ಬಾಕಿಯಿರಲು | ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಗ್ರೂಪ್ "ಬಿ" ವೃಂದಕ್ಕೆ ಉನ್ನತೀಕರಿಸುವ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಕಳುಹಿಸಲಾಗಿತ್ತು. ಆರ್ಥಿಕ ಇಲಾಖೆಯ ಅಭಿಪ್ರಾಯದ ಮೇರೆಗೆ ಕರ್ನಾಟಕ ರಾಜ್ಯ ಆರನೇ ವೇತನ ಆಯೋಗದ ಮುಂದೆ ಶಿಫಾರಸ್ಸು ಕೋರಿ ಮಂಡಿಸಲಾಗಿತ್ತು. ಈ ಹುದ್ದೆಗಳ ಉನ್ನತೀಕರಣದ ಅವಶ್ಯಕತೆಯ ಬಗ್ಗೆ ಆರನೇ ವೇತನ |

| | | |
|---|---|---|
| | ಕಾರಣವೇನು; ಸರ್ಕಾರ ಈ ಬಗ್ಗೆ ಯಾವ ರೀತಿ ಕ್ರಮ ಕೈಗೊಳ್ಳಲಿದೆ; | ಆಯೋಗಕ್ಕೆ ಮನವರಿಕೆ ಮಾಡಲಾಗಿತ್ತು. ಪ್ರಸ್ತುತ ಆರನೇ ವೇತನ ಆಯೋಗ ಆರ್ಥಿಕ ಇಲಾಖೆಗೆ ತನ್ನ ಶಿಫಾರಸ್ಸು ಸಲ್ಲಿಸಿದ್ದು ಶಿಫಾರಸ್ಸಿನ ವಿವರಗಳು ನಮ್ಮ ಇಲಾಖೆಗೆ ಲಭ್ಯವಿರುವುದಿಲ್ಲ.<br>ಈ ನಡುವೆ ಅಂದಿನ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆದೇಶದ ಮೇರೆಗೆ ವಿಷಯವನ್ನು ದಿನಾಂಕ: 27-03-2018 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಮಂಡಿಸಲಾಗಿತ್ತು. ಚುನಾವಣಾ ಮಾದರಿ ನೀತಿ ಸಂಹಿತೆ ಜಾರಿಯಾದ ಹಿನ್ನೆಲೆಯಲ್ಲಿ ಸಚಿವ ಸಂಪುಟವು ಯಾವುದೇ ನಿರ್ಣಯವನ್ನು ತೆಗೆದುಕೊಳ್ಳದೆ ವಿಷಯವನ್ನು ಮುಂದೂಡಿರುತ್ತದೆ. ಪ್ರಸ್ತುತ ಆರನೇ ವೇತನ ಆಯೋಗವು ಅಂತಿಮ ವರದಿ ನೀಡಿರುವುದಿರಂದ ವರದಿಯ ಅಭಿಪ್ರಾಯ ಆಧರಿಸಿ ಮುಂದಿನ ಕ್ರಮ ಜರುಗಿಸಲು ಕ್ರಮ ವಹಿಸಲಾಗುವುದು. |
| ಊ | ಅಗತ್ಯ ಹೆಚ್ಚುವರಿ ಹುದ್ದೆ ಸೃಜನೆ, ಖಾಲಿ ಹುದ್ದೆಗಳ ಭರ್ತಿ, ತಾಲ್ಲೂಕು ಪಂಚಾಯತ್ ಮತ್ತು ಜಿಲ್ಲಾಪಂಚಾಯತ್ ನಲ್ಲಿ ಅನ್ಯ ಇಲಾಖೆ ಅಧಿಕಾರಿಗಳ ಪ್ರಭಾರ ನಿಲ್ಲಿಸಿ ನೇರ ನೇಮಕಾತಿಯಲ್ಲಿ ಭರ್ತಿ ಮಡುವುದು, ಸೇರಿದಂತೆ ಇಲಾಖೆಯಲ್ಲಿನ ಕಾರ್ಯಕ್ರಮಗಳ ಅನುಷ್ಠಾನವನ್ನು ವ್ಯವಸ್ಥಿತವಾಗಿ ನಿರ್ವಹಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕರ್ನಾಟಕ ಸಾಮಾನ್ಯ ಸೇವೆ(ಅಭಿವೃದ್ಧಿ ಮತ್ತು ಆಡಳಿತ ಸೇವೆ)ಗೆ ಸೇರಿದ ಈ ಕೆಳಕಂಡ ವೃಂದಗಳಲ್ಲಿ ಹುದ್ದೆಗಳ ಸೃಜನೆ ಮತ್ತು ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡ ಕ್ರಮಗಳ ವಿವರ ಈ ಕೆಳಕಂಡಂತೆ ಇದೆ<br>1) ಪ್ರತಿ ಜಿಲ್ಲೆಗೆ ಒಂದರಂತೆ, 30 ಹುದ್ದೆಗಳನ್ನು ಉಪ ಕಾರ್ಯದರ್ಶಿ (ಆಯ್ಕೆ ಶ್ರೇಣಿ) ಯ ಅಪರ ಮುಖ್ಯ ಕಾರ್ಯದರ್ಶಿಯ ಹುದ್ದೆಯನ್ನು ಸೃಜಿಸಲು ಪ್ರಸ್ತಾವನೆಯನ್ನು ಈ ಹಿಂದಿನ ಸಚಿವ ಸಂಪುಟದ ಮುಂದೆ ಮಂಡಿಸಲಾಗಿದ್ದು, ಹೊಸ ಸರ್ಕಾರ ಬಂದ ನಂತರ ಮಂಡಿಸುವಂತೆ ಆದೇಶಿಸಿದ್ದು, ಅದರಂತೆ ಕ್ರಮ ವಹಿಸಲಾಗುತ್ತಿದೆ.<br>2) ಕರ್ನಾಟಕ ಸಾಮಾನ್ಯ ಸೇವೆ ಮತ್ತು ಅಭಿವೃದ್ಧಿ ಆಡಳಿತ ಸೇವೆಯ ವೃಂದಕ್ಕೆ ಸೇರಿದ ಉಪ ಕಾರ್ಯದರ್ಶಿ ಆಯ್ಕೆ ಶ್ರೇಣಿ ವೃಂದದ ಹುದ್ದೆಗಳಿಗೆ ಉಪ ಕಾರ್ಯದರ್ಶಿ ಹಿರಿಯ ಶ್ರೇಣಿ ವೃಂದದ ಅರ್ಹ ಅಧಿಕಾರಿಗಳಿಂದ ಮುಂಬಡ್ತಿ ಮೂಲಕ ಹಾಗೂ ಉಪ ಕಾರ್ಯದರ್ಶಿ, ಹಿರಿಯ ಶ್ರೇಣಿ ವೃಂದಕ್ಕೆ ಕಾರ್ಯನಿರ್ವಾಹಕ ಅಧಿಕಾರಿ/ ಸಹಾಯಕ ಕಾರ್ಯದರ್ಶಿ ವೃಂದದ ಅರ್ಹ ಅಧಿಕಾರಿಗಳಿಂದ ಕಾಲಕಾಲಕ್ಕೆ ಮುಂಬಡ್ತಿಯಿಂದ ಭರ್ತಿ ಮಾಡಲು ಕ್ರಮ ವಹಿಸಲಾಗುತ್ತಿದೆ.<br>3) ಕಾರ್ಯನಿರ್ವಾಹಕ ಅಧಿಕಾರಿ/ ಸಹಾಯಕ ಕಾರ್ಯದರ್ಶಿ ಹುದ್ದೆಯನ್ನು ವೃಂದ ಮತ್ತು ನೇಮಕಾತಿ ನಿಯಮಗಳ ಅನ್ವಯ ಶೇಕಡ 40% ರಷ್ಟು ನೇರ ನೇಮಕಾತಿಯಿಂದ ಹಾಗೂ ಶೇಕಡ 60% ರಷ್ಟನ್ನು ಮುಂಬಡ್ತಿ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಅದರಂತೆ ಈಗಾಗಲೇ 86 ಕಾರ್ಯನಿರ್ವಾಹಕ ಅಧಿಕಾರಿ/ ಸಹಾಯಕ ಕಾರ್ಯದರ್ಶಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿ ಆದೇಶಿಸಲಾಗಿರುತ್ತದೆ. ಆದರೆ 2011ನೇ ಸಾಲಿನ ಗೆಜೆಟೆಡ್ ಪ್ರೋಬೇಷನರ್ಸ್‌ನ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯ ಬಗ್ಗೆ ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ 60 ಕಾರ್ಯನಿರ್ವಾಹಕ ಅಧಿಕಾರಿಗಳ ನೇಮಕಾತಿ ಆದೇಶವನ್ನು ರದ್ದುಗೊಳಿಸಲಾಗಿದ್ದು, 2011ನೇ ಸಾಲಿನ ಗೆಜೆಟೆಡ್ ಪ್ರೋಬೇಷನರ್ಸ್‌ನ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆ ಬಗ್ಗೆ ಮೊಕದ್ದಮೆ ಮಾನ್ಯ ರಾಜ್ಯ ಉಚ್ಚ ನ್ಯಾಯಾಲಿದಲ್ಲಿ ಬಾಕಿಯಿರುತ್ತದೆ.<br>4) ಕಾರ್ಯನಿರ್ವಾಹಕ ಅಧಿಕಾರಿ/ಸಹಾಯಕ ಕಾರ್ಯದರ್ಶಿಗಳ ಮುಂಬಡ್ತಿಗೆ ಸಂಬಂಧಿಸಿದ ಹುದ್ದೆಗಳನ್ನು ಅರ್ಹ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ಅಧಿಕಾರಿಗಳಿಂದ ವೃಂದ ಮತ್ತು ನೇಮಕಾತಿ ನಿಯಮಗಳ ಅರ್ಹತೆಯ ಆಧಾರದ ಮೇಲೆ |

ಕಾಲಕಾಲಕ್ಕೆ ಮುಂಬಡ್ತಿಯಿಂದ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆ.

5) ಪ್ರಸ್ತುತ ಇಲಾಖೆಗೆ ಸಂಬಂಧಿಸಿದ ಕಾರ್ಯಕ್ರಮಗಳ ಅಸುಷ್ಠಾನದ ಹಿನ್ನೆಲೆಯಲ್ಲಿ ಉಪ ಕಾರ್ಯದರ್ಶಿ, ಹಿರಿಯ ಶ್ರೇಣಿ ಹಾಗೂ ಕಾರ್ಯನಿರ್ವಾಹಕ ಅಧಿಕಾರಿ/ ಸಹಾಯಕ ಕಾರ್ಯದರ್ಶಿ ಹುದ್ದೆಗಳ ಅಧಿಕಾರಿಗಳ ಕೊರತೆ ಇರುವುದರಿಂದ ಇತರೆ ಇಲಾಖೆಯ ಅಧಿಕಾರಿಗಳು ನಿಯೋಜನೆಯ ಮೇಲೆ ಕಾರ್ಯ ನಿರ್ವಹಿಸಲು ಅವಕಾಶವನ್ನು ಕಲ್ಪಿಸಲಾಗಿದ್ದು ಇಲಾಖೆಯ ಅಧಿಕಾರಿಗಳು ನೇರ ನೇಮಕಾತಿ ಹಾಗೂ ಮುಂಬಡ್ತಿಗಳಿಂದ ಭರ್ತಿಯಾದ ಸಂದರ್ಭಗಳಲ್ಲಿ ಅನ್ಯ ಇಲಾಖೆಯ ಅಧಿಕಾರಿಗಳನ್ನು ಕಾಲಕಾಲಕ್ಕೆ ಅವರ ಮಾತೃ ಇಲಾಖೆಗೆ ಹಿಂದಿರುಗಿಸಲು ಕ್ರಮ ವಹಿಸಲಾಗುವುದು.

6) ಜಿಲ್ಲಾ ಪಂಚಾಯತಿಗಳಲ್ಲಿ ಮಂಜೂರಾಗಿರುವ ಲೆಕ್ಕಾಧಿಕಾರಿ ಹಾಗೂ ಮುಖ್ಯ ಲೆಕ್ಕಾಧಿಕಾರಿಗಳ ಹುದ್ದೆ ಹಾಗೂ ಮುಖ್ಯ ಯೋಜನಾಧಿಕಾರಿ ಹಾಗೂ ಯೋಜನಾ ಅಂದಾಜು ಮೌಲ್ಯ ಮಾಪನಾಧಿಕಾರಿ ಹುದ್ದೆಗಳು ಖಾಲಿ ಇದ್ದು, ಸದರಿ ಹುದ್ದೆಗಳು ಆರ್ಥಿಕ ಇಲಾಖೆ ಹಾಗೂ ಯೋಜನಾ ಇಲಾಖೆಯ ಹುದ್ದೆಗಳಾಗಿರುವುದರಿಂದ ಸದರಿ ಹುದ್ದೆಗಳನ್ನು ಭರ್ತಿ ಮಾಡುವಂತೆ ಆರ್ಥಿಕ ಇಲಾಖೆ ಹಾಗೂ ಯೋಜನಾ ಇಲಾಖೆಗಳನ್ನು ಕೋರಲಾಗುತ್ತಿದೆ.

7) ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ 815 ಹುದ್ದೆಗಳು ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್–1 ವೃಂದದ ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ 809 ಹುದ್ದೆಗಳಿಗೆ ನೇಮಕಾತಿ ಮಾಡಲಾಗಿದೆ. ಈ ನೌಕರರು ನೇಮಕಗೊಂಡು ಹಾಲಿ ಬುನಾದಿ ತರಬೇತಿ ಪಡೆಯುತ್ತಿರುತ್ತಾರೆ.

8) ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್–2 ವೃಂದದ 358 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದ 95 ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ ಹುದ್ದೆಗಳನ್ನು ವಿಶೇಷ ನೇಮಕಾತಿ ನಿಯಮಗಳಡಿ ಭರ್ತಿ ಮಾಡಲು ಕ್ರಮ ವಹಿಸಲಾಗುತ್ತಿದೆ.

9) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್–1 ಮತ್ತು ಗ್ರೇಡ್–2 ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆಗಳಿಗೆ ನೇಮಕಾತಿ ಪ್ರಾಧಿಕಾರ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಉಪಕಾರ್ಯದರ್ಶಿ (ಅಭಿವೃದ್ಧಿ) ರವರೇ ಆಗಿರುವುದರಿಂದ ಮುಂಬಡ್ತಿ ಕೋಟಾದ ಖಾಲಿ ಹುದ್ದೆಗಳನ್ನು ಅರ್ಹ ನೌಕರರು ಲಭ್ಯವಾದಂತೆ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮುಂಬಡ್ತಿ ಮೂಲಕ ಭರ್ತಿ ಮಾಡಲು ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರವರು ಕ್ರಮ ವಹಿಸುತ್ತಾರೆ. ಈ ಬಗ್ಗೆ ಸರ್ಕಾರದಿಂದ ಈಗಾಗಲೇ ನಿರ್ದೇಶನ ನೀಡಲಾಗಿದೆ.

ಸಂಖ್ಯೆ: ಗ್ರಾಅಪ 636 ಗ್ರಾಪಂಅ 2018

(ಕೃಷ್ಣ ಬೈರೇಗೌಡ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್,
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು
ಹಾಗೂ ಸಂಸದೀಯ ವ್ಯವಹಾರಗಳ ಸಚಿವರು.